Akashvani: Bangalore
National Bulletin In Kannada
10.01.2026 : 7.35AM

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

10.01.2026 : 7.35AM

********

**ಮುಖ್ಯಾಂಶಗಳು** :

1. ಇದೇ ೨೮ರಿಂದ ಏಪ್ರಿಲ್ ೨ರ ವರೆಗೆ ಸಂಸತ್ತಿನ ಬಜೆಟ್ ಅಧಿವೇಶನ
2. ಗುಜರಾತ್‌ಗೆ ಇಂದಿನಿಂದ ಪ್ರಧಾನಿ ನರೇಂದ್ರ ಮೋದಿ ಮೂರು ದಿನಗಳ ಭೇಟಿ; ಸೋಮನಾಥ ಸ್ವಾಭಿಮಾನ ಪರ್ವದಲ್ಲಿ ಭಾಗಿ
3. ಫಿಜಿ ಕೃಷಿ ಸಚಿವರೊಂದಿಗೆ ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್ ದ್ವಿಪಕ್ಷೀಯ ಮಾತುಕತೆ
4. ಡಬ್ಲ್ಯೂಪಿಎಲ್ ಟಿ-೨೦ ಕ್ರಿಕೆಟ್; ಮುಂಬೈ ಇಂಡಿಯನ್ಸ್ ವಿರುದ್ಧ ಆರ್‌ಸಿಬಿ ತಂಡಕ್ಕೆ ಮೂರು ವಿಕೆಟ್‌ಗಳ ರೋಚಕ ಗೆಲುವು

********

ಸಂಸತ್ತಿನ ಬಜೆಟ್ ಅಧಿವೇಶನ ಈ ತಿಂಗಳ ೨೮ರಿಂದ ಪ್ರಾರಂಭವಾಗಿ ಏಪ್ರಿಲ್ ೨ರ ವರೆಗೆ ನಡೆಯಲಿದೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಬಜೆಟ್ ಅಧಿವೇಶನದ ಮೊದಲ ಹಂತ ಫೆಬ್ರವರಿ ೧೩ರಂದು ಮುಕ್ತಾಯಗೊಳ್ಳಲಿದೆ. ಬಜೆಟ್ ಅಧಿವೇಶನದ ಎರಡನೇ ಹಂತ ಮಾರ್ಚ್ ೯ರಂದು ಪ್ರಾರಂಭವಾಗಿ ಏಪ್ರಿಲ್ ೨ರಂದು ಮುಕ್ತಾಯಗೊಳ್ಳಲಿದೆ ಎಂದು ತಿಳಿಸಿದ್ದಾರೆ. ಅರ್ಥಪೂರ್ಣ ಚರ್ಚೆ ಮತ್ತು ಜನ ಕೇಂದ್ರಿತ ಆಡಳಿತದ ಕಡೆಗೆ ಇದು ಒಂದು ಪ್ರಮುಖ ಹೆಜ್ಜೆಯಾಗಿದೆ. ಕೇಂದ್ರ ಸರ್ಕಾರದ ಶಿಫಾರಸ್ಸಿನ ಮೇರೆಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ೨೦೨೬ರ ಬಜೆಟ್ ಅಧಿವೇಶನಕ್ಕಾಗಿ ಸಂಸತ್ತಿನ ಉಭಯ ಸದನಗಳನ್ನು ಕರೆಯಲು ಅನುಮೋದನೆ ನೀಡಿದ್ದಾರೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ.

********

ಪ್ರಧಾನಿ ನರೇಂದ್ರ ಮೋದಿ ಅವರು ಇಂದಿನಿಂದ ಮೂರು ದಿನಗಳ ಕಾಲ ಗುಜರಾತ್‌ಗೆ ಭೇಟಿ ನೀಡಲಿದ್ದಾರೆ. ಭೇಟಿಯ ಸಮಯದಲ್ಲಿ ಅವರು ಸೋಮನಾಥ ಸ್ವಾಭಿಮಾನ ಪರ್ವ ಸೇರಿದಂತೆ ಹಲವಾರು ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ರಾಜ್‌ಕೋಟ್, ಅಹಮದಾಬಾದ್ ಮತ್ತು ಗಾಂಧಿನಗರದ ಪ್ರಮುಖ ಅಭಿವೃದ್ಧಿ ಕಾರ್ಯಕ್ರಮಗಳು ಮತ್ತು ರಾಜತಾಂತ್ರಿಕ ಕಾರ್ಯಕ್ರಮಗಳಲ್ಲಿ ಪ್ರಧಾನಿ ಪಾಲ್ಗೊಳ್ಳಲಿದ್ದಾರೆ. ಸೋಮನಾಥ ದೇವಾಲಯದಲ್ಲಿ ನಾಲ್ಕು ದಿನಗಳ ಸೋಮನಾಥ ಸ್ವಾಭಿಮಾನ ಪರ್ವ ಗುರುವಾರ ಗಿರ್ ಸೋಮನಾಥ ಜಿಲ್ಲೆಯ ಕರಾವಳಿ ಪಟ್ಟಣವಾದ ವೆರಾವಲ್‌ನಲ್ಲಿ ಪ್ರಾರಂಭವಾಯಿತು. ೧೦೨೬ನೇ ಇಸವಿಯಲ್ಲಿ ಮೊಹಮ್ಮದ್ ಘಜ್ನಿ, ಸೋಮನಾಥ ದೇವಾಲಯದ ಮೇಲೆ ಮೊದಲ ದಾಳಿ ನಡೆಸಿ ಒಂದು ಸಾವಿರ ವರ್ಷಗಳು ಸಂದ ಹಿನ್ನೆಲೆಯಲ್ಲಿ ಈ ಸ್ವಾಭಿಮಾನ ಪರ್ವವನ್ನು ಆಯೋಜಿಸಲಾಗಿದೆ. ಇದರ ಜೊತೆಗೆ ೧೯೫೧ರಲ್ಲಿ ದೇವಾಲಯವನ್ನು ಪುನರ್ ಸ್ಥಾಪಿಸಿದ ೭೫ನೇ ವಾರ್ಷಿಕೋತ್ಸವವನ್ನು ಆಚರಿಸಲಾಗುತ್ತಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಸಂಜೆ ಸೋಮನಾಥ ದೇವಾಲಯಕ್ಕೆ ಭೇಟಿ ನೀಡಿ, ಓಂಕಾರ ಮಂತ್ರ ಪಠಣದಲ್ಲಿ ಭಾಗವಹಿಸಲಿದ್ದಾರೆ. ದೇವಾಲಯದಲ್ಲಿ ಡ್ರೋನ್ ಪ್ರದರ್ಶನವನ್ನು ಸಹ ಅವರು ವೀಕ್ಷಿಸಲಿದ್ದಾರೆ. ಶತಮಾನಗಳಿಂದ ಸೋಮನಾಥ ದೇವಾಲಯವನ್ನು ರಕ್ಷಿಸುತ್ತಾ ಪ್ರಾಣತ್ಯಾಗ ಮಾಡಿದ ಅನೇಕ ವೀರರನ್ನು ಗೌರವಿಸಲು ನಾಳೆ ಆಯೋಜಿಸಲಾಗಿರುವ ಶೌರ್ಯ ಯಾತ್ರೆಯಲ್ಲಿ ಪ್ರಧಾನಿ ಪಾಲ್ಗೊಳ್ಳಲಿದ್ದಾರೆ.

********

ಭಾರತೀಯ ರೈಲ್ವೆ, ಜಾಗತಿಕ ಮಾನದಂಡವನ್ನು ಸ್ಥಾಪಿಸಲು ಮತ್ತು ೨೦೪೭ರ ವೇಳೆಗೆ ಅಭಿವೃದ್ಧಿ ಹೊಂದಿದ ರಾಷ್ಟ್ರವಾಗುವತ್ತ ಭಾರತದ ಪ್ರಯಾಣದಲ್ಲಿ ಪ್ರಮುಖಪಾತ್ರ ವಹಿಸಲು ಉತ್ತಮ ಸ್ಥಾನದಲ್ಲಿದೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ ರೈಲ್ವೆಯ ನೂರು ಅಧಿಕಾರಿಗಳಿಗೆ ಅತಿ ವಿಶಿಷ್ಟ ರೈಲು ಸೇವಾ ಪುರಸ್ಕಾರ ಹಾಗು ಉತ್ತಮವಾಗಿ ಕಾರ್ಯ ನಿರ್ವಹಿಸಿರುವ ೨೬ ರೈಲ್ವೆ ವಲಯಗಳಿಗೆ ಪ್ರಶಸ್ತಿ ಪ್ರದಾನ ಮಾಡಿ, ಅವರು ಮಾತನಾಡಿದರು. ೨೦೨೬ಕ್ಕೆ ಭಾರತೀಯ ರೈಲ್ವೆ ಆರು ಹೊಸ ಸಂಕಲ್ಪಗಳನ್ನು ಮಾಡಿದೆ. ಇವುಗಳಲ್ಲಿ ೫೨ ವಾರಗಳಲ್ಲಿ ವ್ಯವಸ್ಥಿತ ಸುಧಾರಣೆಗಳನ್ನು ಕೈಗೊಳ್ಳುವುದು, ವಿಶ್ವಾಸಾರ್ಹತೆ ಮತ್ತು ಉತ್ಪಾದಕತೆಯನ್ನು ಸುಧಾರಿಸಲು ತಂತ್ರಜ್ಞಾನ ಹಾಗೂ ಕೃತಕ ಬುದ್ಧಿಮತ್ತೆಯನ್ನು ಬಳಸುವುದು,

ನಿರ್ವಹಣಾ ಮಾನದಂಡಗಳನ್ನು ನವೀಕರಿಸುವುದು, ಸುರಕ್ಷತೆಯನ್ನು ಬಲಪಡಿಸುವುದು ಮತ್ತು ವಸಾಹತುಶಾಹಿ ಮನಸ್ಥಿತಿಯಿಂದ ದೂರ ಸರಿಯುವುದು ಸೇರಿವೆ ಎಂದು ಅವರು ತಿಳಿಸಿದರು. ನೂತನ ನಾವೀನ್ಯತೆ ಪೋರ್ಟಲ್, ಭಾರತೀಯ ರೈಲ್ವೆಯನ್ನು ಸ್ಟಾರ್ಟ್‌ಅಪ್‌ಗಳು ಮತ್ತು ನಾವೀನ್ಯಕಾರರೊಂದಿಗೆ ಸಂಪರ್ಕಿಸುತ್ತದೆ ಮತ್ತು ನಿರ್ವಹಣಾ ಕಾರ್ಯಕ್ಕಾಗಿ ಕೃತಕ ಬುದ್ಧಿಮತ್ತೆಯನ್ನು ವ್ಯಾಪಕವಾಗಿ ಬಳಸಲಾಗುತ್ತದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಹೇಳಿದರು.

****ಧ್ವನಿ**** ಅಶ್ವಿನಿ ವೈಷ್ಣವ್

********

ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ನವದೆಹಲಿಯಲ್ಲಿ ನಿನ್ನೆ ಫಿಜಿ ದೇಶದ ಕೃಷಿ ಮತ್ತು ಜಲಮಾರ್ಗಗಳ ಸಚಿವ ತೋಮಸಿ ತುನಾಬುನಾ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಿದರು. ಸಭೆಯ ನಂತರ ಮಾತನಾಡಿದ ಸಚಿವ ಶಿವರಾಜ್ ಸಿಂಗ್ ಚೌಹಾಣ್, ಭಾರತ ಮತ್ತು ಫಿಜಿ ದ್ವಿಪಕ್ಷೀಯ ಸಹಕಾರದ ಪ್ರಮುಖ ಕ್ಷೇತ್ರಗಳಾಗಿ ಕೃಷಿ ಮತ್ತು ಆಹಾರ ಭದ್ರತೆಯ ಮಹತ್ವವನ್ನು ಗುರುತಿಸುತ್ತವೆ. ಪರಸ್ಪರ ಸಹಕಾರ, ಗೌರವ ಮತ್ತು ಬಲವಾದ ಸಾಂಸ್ಕೃತಿಕ ಹಾಗೂ ಜನರಿಂದ ಜನರ ನಡುವಿನ ಸಂಬಂಧಗಳ ಆಧಾರದ ಮೇಲೆ ಫಿಜಿಯೊಂದಿಗೆ ಭಾರತ ಐತಿಹಾಸಿಕ ಸಂಬಂಧ ಹೊಂದಿದೆ ಎಂದು ಹೇಳಿದರು. ಸಭೆಯ ವೇಳೆ ಉಭಯ ನಾಯಕರು, ವಿದ್ಯಾರ್ಥಿ ವಿನಿಮಯ, ತರಬೇತಿ ಮತ್ತು ಸಾಮರ್ಥ್ಯವರ್ಧನೆ ಕಾರ್ಯಕ್ರಮಗಳು, ಸಣ್ಣ ಪ್ರಮಾಣದ ಯಂತ್ರೋಪಕರಣಗಳನ್ನೊಳಗೊಂಡ ತಂತ್ರಜ್ಞಾನ ಹಂಚಿಕೆ, ಡಿಜಿಟಲ್ ಕೃಷಿ ಪರಿಕರಗಳು ಸೇರಿದಂತೆ ಪ್ರಮುಖ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಹಯೋಗದ ಬಗ್ಗೆ ಚರ್ಚಿಸಿದರು.

********

ಆಪರೇಷನ್ ಸಿಂದೂರ ನಂತರ ಪಾಕಿಸ್ತಾನ ತನ್ನ ಗಂಭೀರ ನ್ಯೂನತೆಗಳನ್ನು ಬಹಿರಂಗವಾಗಿ ಒಪ್ಪಿಕೊಂಡಿದೆ ಎಂದು ಭಾರತೀಯ ರಕ್ಷಣಾ ಪಡೆಗಳ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್ ಹೇಳಿದ್ದಾರೆ. ಪುಣೆಯ ಸಾರ್ವಜನಿಕ ನೀತಿ ಉತ್ಸವದಲ್ಲಿ ತಂತ್ರಜ್ಞಾನ ಮತ್ತು ರಾಷ್ಟ್ರೀಯ ಭದ್ರತೆ ಕುರಿತ ಅಧಿವೇಶನ ಉದ್ದೇಶಿಸಿ ಮಾತನಾಡಿದ ಅವರು, ಕಳೆದ ವರ್ಷ ಏಪ್ರಿಲ್‌ನಲ್ಲಿ ನಡೆದ

ಭಯೋತ್ಪಾದಕ ದಾಳಿಯ ನಂತರ ಕಳೆದ ಮೇ ತಿಂಗಳಿನಲ್ಲಿ ಪ್ರಾರಂಭಿಸಲಾದ ಆಪರೇಷನ್ ಸಿಂದೂರ, ಪಾಕಿಸ್ತಾನವನ್ನು ಸಾಂವಿಧಾನಿಕ ತಿದ್ದುಪಡಿಗಳನ್ನು ಜಾರಿಗೆ ತರುವಂತೆ ಒತ್ತಡ ಹೇರಿತು. ಇದು ನೆರೆಯ ರಾಷ್ಟ್ರದ ನ್ಯೂನತೆಗಳಿಗೆ ಸಾಕ್ಷಿಯಾಗಿದೆ ಎಂದು ಅಭಿಪ್ರಾಯಪಟ್ಟರು. ಆಪರೇಷನ್ ಸಿಂಧೂರ ಅನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ. ಪಾಕಿಸ್ತಾನ ಸಂವಿಧಾನದ ೨೪೩ನೇ ವಿಧಿಗೆ ತಿದ್ದುಪಡಿ ಮಾಡಿರುವುದು, ಆ ದೇಶದ ಉನ್ನತ ರಕ್ಷಣಾ ವ್ಯವಸ್ಥೆಯಲ್ಲಿ ಗಮನಾರ್ಹ ಬದಲಾವಣೆಗಳನ್ನು ತಂದಿದೆ ಎಂದು ಜನರಲ್ ಅನಿಲ್ ಚೌಹಾಣ್ ತಿಳಿಸಿದರು.

********

ಹಿಮಾಚಲಪ್ರದೇಶದ ಸಿರ್‌ಮೌರ್ ಜಿಲ್ಲೆಯ ಹರಿಪುರ್‌ಧಾರ್ ಬಳಿ ನಿನ್ನೆ ಖಾಸಗಿ ಬಸ್ಸೊಂದು ಅಪಘಾತಕ್ಕೀಡಾಗಿ ೧೪ ಜನರು ಸಾವನ್ನಪ್ಪಿದ್ದು, ಇತರೆ ೩೩ ಪ್ರಯಾಣಿಕರು ಗಾಯಗೊಂಡಿದ್ದಾರೆ. ಬಸ್ ಸಲೋನ್‌ನಿಂದ ಹರಿಪುರ್‌ಧಾರ್‌ಗೆ ಪ್ರಯಾಣಿಸುತ್ತಿತ್ತು. ಗಾಯಾಳುಗಳನ್ನು ಹೆಚ್ಚಿನ ಚಿಕಿತ್ಸೆಗಾಗಿ ಶಿಮ್ಲಾದ ಆಸ್ಪತ್ರೆಗೆ ದಾಖಲಿಸಲಾಗಿದೆ. ಈ ಘಟನೆ ಕುರಿತು ದುಃಖ ವ್ಯಕ್ತಪಡಿಸಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ ಮತ್ತು ಹಿಮಾಚಲಪ್ರದೇಶ ಮುಖ್ಯಮಂತ್ರಿ ಸುಖವಿಂದರ್ ಸಿಂಗ್, ಅಪಘಾತದಲ್ಲಿ ಮೃತರ ಕುಟುಂಬಗಳಿಗೆ ಸಂತಾಪ ಸೂಚಿಸಿದ್ದಾರೆ. ಇದೇ ವೇಳೆ, ಪ್ರಧಾನಮಂತ್ರಿಗಳ ರಾಷ್ಟ್ರೀಯ ಪರಿಹಾರ ನಿಧಿಯಿಂದ ಅಪಘಾತದಲ್ಲಿ ಮೃತರ ಕುಟುಂಬಗಳಿಗೆ ತಲಾ ೨ ಲಕ್ಷ ರೂಪಾಯಿ ಹಾಗೂ ಗಾಯಾಳುಗಳಿಗೆ ತಲಾ ೫೦ ಸಾವಿರ ರೂಪಾಯಿಗಳ ಪರಿಹಾರವನ್ನು ಪ್ರಧಾನಿ ನರೇಂದ್ರ ಮೋದಿ ಘೋಷಿಸಿದ್ದಾರೆ.

********

ಭಾರತ, ಅಮೆರಿಕದ ಜೊತೆ ದ್ವಿಪಕ್ಷೀಯ ವ್ಯಾಪಾರ ಒಪ್ಪಂದದ ಮಾತುಕತೆಗೆ ಬದ್ಧವಾಗಿವೆ ಎಂದು ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಹೇಳಿದ್ದಾರೆ. ನವದೆಹಲಿಯಲ್ಲಿ ಸುದ್ದಿಗಾರೊಂದಿಗೆ ಮಾತನಾಡಿದ ಅವರು, ಸಮತೋಲಿತ ಮತ್ತು ಪರಸ್ಪರ ಲಾಭದಾಯಕ ವ್ಯಾಪಾರ ಒಪ್ಪಂದಕ್ಕೆ ಬರಲು ಎರಡೂ ಕಡೆಯವರು ಹಲವು ಸುತ್ತಿನ ಮಾತುಕತೆ ನಡೆಸಿದ್ದಾರೆ. ಭಾರತ, ಎರಡು ಪೂರಕ ಆರ್ಥಿಕತೆಗಳ ನಡುವಿನ ಪರಸ್ಪರ ಪ್ರಯೋಜನಕಾರಿ ವ್ಯಾಪಾರ

ಒಪ್ಪಂದದಲ್ಲಿ ಆಸಕ್ತಿ ಹೊಂದಿದೆ ಮತ್ತು ಅದನ್ನು ಮುಕ್ತಾಯಗೊಳಿಸಲು ಎದುರು ನೋಡುತ್ತಿದೆ ಎಂದು ತಿಳಿಸಿದ್ದಾರೆ.

********

ನವಿ ಮುಂಬೈನಲ್ಲಿ ಕಳೆದ ರಾತ್ರಿ ನಡೆದ ಮಹಿಳಾ ಪ್ರೀಮಿಯರ್ ಲೀಗ್ - ಡಬ್ಲ್ಯೂಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯ ಉದ್ಘಾಟನಾ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ, ಹಾಲಿ ಚಾಂಪಿಯನ್ ಮುಂಬೈ ಇಂಡಿಯನ್ಸ್ ತಂಡವನ್ನು ಮೂರು ವಿಕೆಟ್‌ಗಳಿಂದ ಮಣಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಮುಂಬೈ ಇಂಡಿಯನ್ಸ್ ತಂಡ, ನಿಗದಿತ ೨೦ ಓವರ್‌ಗಳಲ್ಲಿ ಆರು ವಿಕೆಟ್‌ಗಳ ನಷ್ಟಕ್ಕೆ ೧೫೪ ರನ್ ಗಳಿಸಿತು. ಇದಕ್ಕೆ ಉತ್ತರವಾಗಿ, ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ, ನಿಗದಿತ ಓವರ್‌ಗಳಲ್ಲಿ ಏಳು ವಿಕೆಟ್‌ಗಳ ನಷ್ಟಕ್ಕೆ ೧೫೭ರನ್ ಗಳಿಸಿ ಗೆಲುವು ತನ್ನದಾಗಿಸಿಕೊಂಡಿತು. ನಾಡಿನ್ ಡಿ ಕ್ಲರ್ಕ್ ಅಜೇಯ ೬೩ ರನ್ ಗಳಿಸುವ ಮೂಲಕ ಆಲ್‌ರೌಂಡರ್ ಪ್ರದರ್ಶನ ನೀಡಿ, ಪಂದ್ಯದ ಗೆಲುವಿಗೆ ನೆರವಾದರು. ಮಹಿಳಾ ಪ್ರೀಮಿಯರ್ ಲೀಗ್‌ನ ನಾಲ್ಕನೇ ಆವೃತ್ತಿಯ ಮೊದಲ ಹಂತದ ಪಂದ್ಯಗಳು ನವಿ ಮುಂಬೈನ ಡಾ. ಡಿ.ವೈ. ಪಾಟೀಲ್ ಸ್ಪೋರ್ಟ್ಸ್ ಅಕಾಡೆಮಿ, ಅನಂತರ ವಡೋದರಾದ ಬಿಸಿಎ ಕ್ರೀಡಾಂಗಣದಲ್ಲಿ ಉಳಿದ ೧೧ ಪಂದ್ಯಗಳು ಸೇರಿದಂತೆ ಪ್ಲೇಆಫ್ ಪಂದ್ಯಗಳು ನಡೆಯಲಿವೆ.

********

ಎರಡು ಬಾರಿಯ ಒಲಿಂಪಿಕ್ ಪದಕ ವಿಜೇತೆ ಪಿ.ವಿ. ಸಿಂಧು ಕೌಲಾಲಂಪುರದಲ್ಲಿಂದು ನಡೆಯಲಿರುವ ಮಲೇಷ್ಯಾ ಓಪನ್ ಸೂಪರ್ ೧೦೦೦ ಬ್ಯಾಡ್ಮಿಂಟನ್ ಪಂದ್ಯಾವಳಿಯ ಸೆಮಿಫೈನಲ್‌ನಲ್ಲಿ ಚೀನಾದ ವಾಂಗ್ ಝಿ ಯಿ ಅವರನ್ನು ಎದುರಿಸಲಿದ್ದಾರೆ. ಕ್ವಾಟರ್ ಫೈನಲ್‌ನಲ್ಲಿ ಜಪಾನ್‌ನ ಅಕಾನೆ ಯಮಗುಚಿ ಗಾಯದಿಂದಾಗಿ ಪಂದ್ಯಾವಳಿಯಿಂದ ಹೊರನಡೆದ ನಂತರ ಸಿಂಧು ಸೆಮಿಫೈನಲ್‌ಗೆ ಮುನ್ನಡೆದರು.

********